ದಿನಗಳಲ್ಲಿ ಕಲಂ 371(ಜೆ)ಗೆ ಹಲವಾರು ತಿದ್ದುಪಡಿ ತಂದಿರುವುದರಿಂದ ಈ ತಿದ್ದುಪಡಿಯನ್ನು ಅಳವಡಿಸುವ ನಿಟ್ಟಿನಲ್ಲಿ ತಡವಾಗಿದೆಯೇ ವಿನಹಃ ವಿಶ್ವವಿದ್ಯಾಲಯದಿಂದ ಈ ನಿಟ್ಟಿನಲ್ಲಿ ನಿಧಾನವಾಗಿರುವುದಿಲ್ಲ. ಆದ್ದರಿಂದ ಶೀಘ್ರದಲ್ಲಿಯೇ ಅಭ್ಯರ್ಥಿಗಳ ಸಂದರ್ಶನ ನಡೆಸಿ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು.

ರೇಷ್ಮೆ ಬೆಳೆಗಾರರು

1218(2327); ಶ್ರೀ ಕೃಷ್ಣಾರೆಡ್ಡಿ ಎಂ. (ಚಿಂತಾಮಣಿ)

ಅ) ಚಿಂತಾಮಣಿ ತಾಲ್ಲೂಕಿನ ರೇಷ್ಮೆ ಬೆಳೆಗಾರರ ಸಂಖ್ಯೆ ಎಷ್ಟು; ಮತ್ತು ಎಷ್ಟು ಎಕರೆ ಪ್ರದೇಶದಲ್ಲಿ ರೇಷ್ಮೆ ಬೆಳೆಯನ್ನು ಬೆಳೆಯಲಾಗುತ್ತಿದೆ (ಹೋಬಳಿವಾರು ಮಾಹಿತಿ ನೀಡುವುದು);

ಆ) ರೇಷ್ಮೆ ಬೆಳೆಗಾರರಿಗೆ ಸರ್ಕಾರದ ವತಿಯಿಂದ ಯಾವ ಯಾವ ಯೋಜನೆಗಳು ಜಾರಿಗೊಳಿಸಲಾಗಿದೆ (ವಿವರ ನೀಡುವುದು)?

ಶ್ರೀ ಸಿದ್ದರಾಮಯ್ಯ (ಮಾನ್ಯಮುಖ್ಯಮಂತ್ರಿಗಳು)

ಅ) ಚಿಂತಾಮಣಿ ತಾಲ್ಲೂಕಿನಲ್ಲಿರುವ ಹಿಪ್ಪುನೇರಳೆ ವಿಸ್ತೀರ್ಣದ ಹಾಗೂ ರೇಷ್ಮೆ ಬೆಳೆಗಾರರ ಹೋಬಳಿವಾರು ವಿವರಗಳು ಕೆಳಕಂಡಂತಿವೆ;

ಕ್ರ ಸಂ	ಹೋಬಳಿ	ಹಿಪ್ಪುನೇರಳೆ ವಿಸ್ತೀರ್ಣ (ಎಕರೆ)	ರೇಷ್ಮೆ ಬೆಳೆಗಾರರು
1	ಕಸಬಾ	2693	986
2	ಅಂಬಾಲಜಿ ದುರ್ಗ	2502	940
3	ಚಿಲಕಲನೇರ್ಪು	705	191
4	ಮುರಗಮಲ್ಲ	375	175
5	ಮುಂಗಾನಹಳ್ಳಿ	370	170
6	ಕೈವಾರ	4355	1591
	ಒಟ್ಟು	**11000**	**4053**

ಆ) 2014–15ನೇ ಸಾಲಿನಲ್ಲಿ ರೇಷ್ಮೆ ಚಟುವಟಿಕೆಗಳಿಗೆ ಉತ್ತೇಜನ ನೀಡಲು ಸರ್ಕಾರವು ಈ ಕೆಳಕಂಡ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸಿದೆ.

ಕೇಂದ್ರ ಪುರಸ್ಕೃತ ಯೋಜನೆಗಳು

1. ಕೆಟಲಿಟಿಕ್ ಅಭಿವೃದ್ಧಿ ಯೋಜನೆ – ಸಾಮಾನ್ಯ
2. ಕೆಟಲಿಟಿಕ್ ಅಭಿವೃದ್ಧಿ ಯೋಜನೆ – ವಿಶೇಷ ಅಭಿವೃದ್ಧಿ ಯೋಜನೆ (SDP)
3. ಕೆಟಲಿಟಿಕ್ ಅಭಿವೃದ್ಧಿ ಯೋಜನೆ – ಹೈದರಾಬಾದ್ ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಯೋಜನೆ (HKRDP)
4. ಕೆಟಲಿಟಿಕ್ ಅಭಿವೃದ್ಧಿ ಯೋಜನೆ – ವಿಶೇಷ ಘಟಕ ಯೋಜನೆ / ಗಿರಿಜನ ಉಪಯೋಜನೆ
5. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ

ರಾಜ್ಯ ವಲಯ ಯೋಜನೆಗಳು

6. ರೇಷ್ಮೆ ಕೃಷಿ ಅಭಿವೃದ್ಧಿಗೆ ನೂತನ ಕರ್ತೃತ್ವ ಶಕ್ತಿ ಮತ್ತು ಭಾಗೀದಾರರಿಗೆ ಸವಲತ್ತುಗಳು
7. ರೇಷ್ಮೆ ಕೃಷಿ ಅಭಿವೃದ್ಧಿಗೆ ನೂತನ ಕರ್ತೃತ್ವ ಶಕ್ತಿ ಮತ್ತು ಭಾಗೀದಾರರಿಗೆ ಸವಲತ್ತುಗಳು –ವಿಶೇಷ ಘಟಕ ಯೋಜನೆ / ಗಿರಿಜನ ಉಪಯೋಜನೆ
8. ಜಿಲ್ಲಾ / ತಾಲ್ಲೂಕು ಪಂಚಾಯತ್ ಯೋಜನೆಗಳು